**All India Radio: Bangalore**
**National Bulletin In Kannada**
**02.04.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**02.04.2026 07.35 a.m.**
**<><><><>**

ಮುಖ್ಯಾಂಶಗಳು

1. ಸಂಸತ್ತಿನ ಬಜೆಟ್ ಅಧಿವೇಶನ ಇಂದು ಮುಕ್ತಾಯ ; ರಾಜ್ಯಸಭೆಯಲ್ಲಿ ಆಂಧ್ರಪ್ರದೇಶ ಪುನರ್ ವಿಂಗಡಣಾ ತಿದ್ದುಪಡಿ ಮಸೂದೆ ಅಂಗೀಕಾರ ಸಾಧ್ಯತೆ
2. ಪಶ್ಚಿಮ-ಏಷ್ಯಾ ಸಂಘರ್ಷ ; ಪ್ರಧಾನಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಗತ್ಯ ವಸ್ತುಗಳ ಲಭ್ಯತೆ ಬಗ್ಗೆ ವಿಸ್ತೃತ ಚರ್ಚೆ
3. ರಸಗೊಬ್ಬರ ಅಕ್ರಮ ದಾಸ್ತಾನು, ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮಕ್ಕೆ ರಾಜ್ಯಗಳಿಗೆ ಕೇಂದ್ರ ನಿರ್ದೇಶನ
4. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿನಿಂದ ೨ ದಿನಗಳ ಅಸ್ಸಾಂ ಪ್ರವಾಸ ; ಬಿಜೆಪಿ ಅಭ್ಯರ್ಥಿಗಳ ಪರ ಪ್ರಚಾರ
5. ಛತ್ತೀಸ್‌ಗಢದಲ್ಲಿ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ; ಪದಕ ಪಟ್ಟಿಯಲ್ಲಿ ಕರ್ನಾಟಕಕ್ಕೆ ಅಗ್ರಸ್ಥಾನ

<><><><>

ಸಂಸತ್ತಿನ ಬಜೆಟ್ ಅಧಿವೇಶನ ಇಂದು ಮುಕ್ತಾಯಗೊಳ್ಳಲಿದೆ. ರಾಜ್ಯಸಭೆಯು ಆಂಧ್ರಪ್ರದೇಶ ಪುನರ್ ವಿಂಗಡಣೆ (ತಿದ್ದುಪಡಿ) ಮಸೂದೆ, ೨೦೨೬ ಅನ್ನು ಇಂದು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳುವ ಸಾಧ್ಯತೆಯಿದೆ. ಬಜೆಟ್ ಅಧಿವೇಶನದ ಮೊದಲ ಭಾಗವು ಕಳೆದ ಜನವರಿ ೨೮ ರಂದು ಆರಂಭವಾಗಿ ಫೆಬ್ರವರಿ ೧೩ ರವರೆಗೆ ನಡೆಯಿತು. ಬಜೆಟ್ ಅಧಿವೇಶನದ ಎರಡನೇ ಚರಣವು ಮಾ.೮ ರಂದು ಆರಂಭವಾಯಿತು. ಮೊದಲ ಹಂತದಲ್ಲಿ, ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯ ಮತ್ತು ೨೦೨೬-೨೭ ರ ಕೇಂದ್ರ ಬಜೆಟ್ ಮೇಲೆ ಚರ್ಚೆ ನಡೆಯಿತು.

ಎರಡನೇ ಹಂತದಲ್ಲಿ, ಸಂಸತ್ತು ಹಣಕಾಸು ಮಸೂದೆ ೨೦೨೬ ಮತ್ತು ವಿನಿಯೋಗ ಮಸೂದೆ ೨೦೨೬ ಗೆ ಅನುಮೋದನೆ ನೀಡಿತು. ಅಲ್ಲದೆ, ಪ್ರಧಾನಿ ನರೇಂದ್ರ ಮೋದಿ ಸಂಸತ್ತಿನ ಎರಡೂ ಸದನಗಳನ್ನು ಉದ್ದೇಶಿಸಿ ಮಾತನಾಡಿದರು, ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಉದ್ಭವಿಸುವ ಪರಿಸ್ಥಿತಿಯ ಕುರಿತು ಸರ್ಕಾರದ ನಿಲುವನ್ನು ಮಂಡಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿ ನಿನ್ನೆ ಭದ್ರತೆ ಕುರಿತ ಸಂಪುಟ ಸಮಿತಿ ಸಭೆ ನಡೆಯಿತು. ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳು ತೆಗೆದುಕೊಂಡ ಕ್ರಮಗಳನ್ನು ಅವಲೋಕಿಸಿ ಪ್ರಧಾನಿ ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಮುಂದಿನ ಉಪಕ್ರಮಗಳ ಕುರಿತು ಚರ್ಚಿಸಿದರು. ಭದ್ರತೆ ಕುರಿತು ಚರ್ಚಿಸಲು ನಡೆದ ಎರಡನೇ ವಿಶೇಷ ಸಿಸಿಎಸ್ ಸಭೆ ಇದಾಗಿತ್ತು. ಸಭೆಯಲ್ಲಿ, ಪ್ರಧಾನಿ ಸಾಮಾನ್ಯ ಜನರಿಗೆ ನಿರ್ಣಾಯಕ ಅಗತ್ಯ ವಸ್ತುಗಳ ಲಭ್ಯತೆಗೆ ಒತ್ತು ನೀಡಬೇಕೆಂದರು. ದೇಶದಲ್ಲಿ ರಸಗೊಬ್ಬರಗಳ ಲಭ್ಯತೆ ಮತ್ತು ಮುಂಗಾರು  ಮತ್ತು ಹಿಂಗಾರು ಋತುಗಳಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಿಕೊಳ್ಳಲು ತೆಗೆದುಕೊಳ್ಳುತ್ತಿರುವ ಕ್ರಮಗಳ ಬಗ್ಗೆಯೂ ಚರ್ಚಿಸಿದರು. ಸಂಘರ್ಷದ ಪರಿಣಾಮದಿಂದ ನಾಗರಿಕರನ್ನು ರಕ್ಷಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಬೇಕು ಎಂದು ಪ್ರಧಾನಿ ನಿರ್ದೇಶನ ನೀಡಿದರು. ತಪ್ಪು ಮಾಹಿತಿ ಮತ್ತು ವದಂತಿಗಳನ್ನು ತಡೆಗಟ್ಟಲು ಸಾರ್ವಜನಿಕರಿಗೆ ಅಧಿಕೃತ ಮಾಹಿತಿಯನ್ನು ಸಕಾಲಿಕದಲ್ಲಿ ಒದಗಿಸಲು ಒತ್ತು ನೀಡಬೇಕೆಂದರು. ಸಭೆಯಲ್ಲಿ, ಉದಯೋನ್ಮುಖ ಸವಾಲುಗಳನ್ನು ತಗ್ಗಿಸಲು ಕೃಷಿ, ರಸಗೊಬ್ಬರಗಳು, ಸಾಗಣೆ, ವಾಯುಯಾನ, ಲಾಜಿಸ್ಟಿಕ್ಸ್ ಮತ್ತು ಎಂಎಸ್ ಎಂಇಗಳಲ್ಲಿ ವಹಿಸಬೇಕಾದ ಮಧ್ಯಸ್ಥಿಕೆಗಳ ಬಗ್ಗೆ ಚರ್ಚಿಸಲಾಯಿತು.  ಅಲ್ಲದೆ, ಅಗತ್ಯ ಪೂರೈಕೆಗಳ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಎಲ್‌ಪಿಜಿ ಮತ್ತು ಎಲ್‌ಎನ್‌ಜಿ ಪೂರೈಕೆ, ಇಂಧನ ಸುಂಕ ಕಡಿತ ಮತ್ತು ಇಂಧನ ವಲಯದ ಕ್ರಮಗಳ ಪರಿಶೀಲನೆಯನ್ನು ಸಹ ಕೈಗೊಳ್ಳಲಾಯಿತು. ಸಂಪುಟ ಕಾರ್ಯದರ್ಶಿ, ಪೆಟ್ರೋಲಿಯಂ ಉತ್ಪನ್ನಗಳು, ವಿಶೇಷವಾಗಿ ಎಲ್‌ಎನ್‌ಜಿ ಮತ್ತು ಎಲ್ ಪಿಜಿ ಪೂರೈಕೆ ಮತ್ತು ಸಾಕಷ್ಟು ಇಂಧನ ಲಭ್ಯತೆಯನ್ನು ಖಾತ್ರಿಪಡಿಸಿಕೊಳ್ಳಲು ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಿಸಿದರು. ಗೃಹ ಬಳಕೆದಾರರಿಗೆ ಎಲ್‌ಪಿಜಿ ಬೆಲೆಗಳಲ್ಲಿ ಬದಲಾವಣೆಯಾಗಿಲ್ಲ ಮತ್ತು ಎಲ್ ಪಿಜಿಯ ದಾಸ್ತಾನು ಮತ್ತು ಕಾಳ ಸಂತೆಯಲ್ಲಿ ಮಾರಾಟವನ್ನು ತಡೆಯಲು ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಜತೆಗೆ ಪಿಎನ್‌ಜಿ ಸಂಪರ್ಕಗಳನ್ನು ವಿಸ್ತರಿಸಲು ಸಹ ಉಪಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸರ್ಕಾರ ಹೇಳಿದೆ. ಬೇಸಿಗೆಯ ಗರಿಷ್ಠ ತಿಂಗಳುಗಳಲ್ಲಿ ವಿದ್ಯುತ್ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ೭ ರಿಂದ ೮ ಗಿಗಾವ್ಯಾಟ್ ಸಾಮರ್ಥ್ಯವಿರುವ ಅನಿಲ ಆಧಾರಿತ ವಿದ್ಯುತ್ ಸ್ಥಾವರಗಳನ್ನು ಅನಿಲ ಸಂಗ್ರಹಣಾ ಕಾರ್ಯವಿಧಾನದಿಂದ ವಿನಾಯಿತಿ ನೀಡುವುದು ಮತ್ತು ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಹೆಚ್ಚಿನ ಕಲ್ಲಿದ್ದಲು ಪೂರೈಕೆಯನ್ನು ಹೆಚ್ಚಿಸುವುದು ಮುಂತಾದ ಕ್ರಮಗಳನ್ನು

ತೆಗೆದುಕೊಳ್ಳಲಾಗಿದೆ. ಕೃಷಿ, ನಾಗರಿಕ ವಿಮಾನಯಾನ, ಸಾಗಣೆ ಮತ್ತು ಸರಕು ಸಾಗಾಣೆಯಂತಹ ವಿವಿಧ ವಲಯಗಳಲ್ಲಿ ಎದುರಾಗುವ ಸವಾಲುಗಳಿಗೆ ತೆಗೆದುಕೊಳ್ಳಬೇಕಾದ ಮಧ್ಯಸ್ಥಿಕೆಗಳ ಬಗ್ಗೆಯೂ ಸಹ ಸಭೆಯಲ್ಲಿ ಚರ್ಚೆ ನಡೆಸಲಾಯಿತು.

<><><>

ಈವರೆಗೆ ೧೯ ರಾಜ್ಯಗಳಲ್ಲಿ ೯.೨೫ ಕೋಟಿ ರೈತರ ಗುರುತಿನ ಚೀಟಿಗಳನ್ನು ಸೃಷಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ವಿವಿಧ ರಾಜ್ಯಗಳ ಕೃಷಿ ಸಚಿವರೊಂದಿಗೆ ಪರಿಶೀಲನಾ ಸಭೆ ನಡೆಸಿದ ಅವರು, ರಸಗೊಬ್ಬರ ಅಕ್ರಮ ದಾಸ್ತಾನು ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ರಾಜ್ಯಗಳಿಗೆ ನಿರ್ದೇಶನ ನೀಡಿದರು. ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಬೆಲೆಯನ್ನು ಪಡೆಯಬೇಕು, ಅವರ ದೂರುಗಳನ್ನು ಸಕಾಲದಲ್ಲಿ ಪರಿಹರಿಸಬೇಕು ಮತ್ತು ರೈತರಿಂದ ನೇರವಾಗಿ ಖರೀದಿಯನ್ನು ಮಾಡಬೇಕು ಎಂದು ಹೇಳಿದರು. ಕೆಲವು ಬೆಳೆಗಳ ಖರೀದಿಗೆ ರಾಜ್ಯಗಳಿಗೆ ನೀಡಲಾದ ಅನುಮೋದನೆಗಳ ಕುರಿತು, ಖರೀದಿಯನ್ನು ಕಟ್ಟುನಿಟ್ಟಾಗಿ ನ್ಯಾಯಯುತ ಸರಾಸರಿ ಗುಣಮಟ್ಟ ಉತ್ಪನ್ನಗಳಿಗೆ ಸೀಮಿತಗೊಳಿಸಬೇಕು. ಆಧಾರ್ ಸಂಯೋಜಿತ ಪೋರ್ಟಲ್‌ಗಳಲ್ಲಿ ರೈತರ ನೋಂದಣಿಯನ್ನು ಮಾಡಬೇಕು ಮತ್ತು ಖರೀದಿ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ಅಥವಾ ಮುಖಚಹರೆ ದೃಢೀಕರಣವನ್ನು ಕಡ್ಡಾಯಗೊಳಿಸಬೇಕು ಎಂದರು.

<><><>

ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಹೊರತಾಗಿಯೂ, ಮುಂಗಾರು ಋತುವಿಗೆ ದೇಶಾದ್ಯಂತ ಕೃಷಿಗೆ ಅಗತ್ಯವಾದ ರಸಗೊಬ್ಬರ, ಬಿತ್ತನೆ ಬೀಜ ಮತ್ತು ರಾಸಾಯನಿಕಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ನವದೆಹಲಿಯಲ್ಲಿ ನಿನ್ನೆ ನಡೆದ ಅಂತರ ಸಚಿವರ ಸಭೆಯನ್ನುದ್ದೇಶಿಸಿ ಮಾತನಾಡಿದ ಕೃಷಿ ಮತ್ತು ರೈತ ಕಲ್ಯಾಣ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಡಾ. ಮಣೀಂದರ್ ಕೌರ್ ದ್ವಿವೇದಿ, ದೇಶಾದ್ಯಂತ ೧೮೫ ಲಕ್ಷ ಕ್ವಿಂಟಾಲ್‌ಗೂ ಅಧಿಕ ಮುಂಗಾರು ಬೆಳೆ ಬೀಜಗಳು ಲಭ್ಯವಿದೆ ಎಂದು ಮಾಹಿತಿ ನೀಡಿದ್ದಾರೆ.

**ಧ್ವನಿ: ಮಣಿಂದರ್ ( ೨೨ ಸೆಕೆಂಡ್‌ಗಳು )**

<><><>

ಕೇಂದ್ರ ಗೃಹ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ಅಮಿತ್ ಶಾ ಎರಡು ದಿನಗಳ ಭೇಟಿಗಾಗಿ ಇಂದು ಮಧ್ಯಾಹ್ನ ಅಸ್ಸಾಂಗೆ ಆಗಮಿಸಲಿದ್ದಾರೆ. ವಿಧಾನಸಭಾ ಚುನಾವಣೆಗೆ ಮುನ್ನ ಭಾರತೀಯ ಜನತಾ ಪಕ್ಷ ಮತ್ತು ಇತರ ಎನ್‌ಡಿಎ ಅಭ್ಯರ್ಥಿಗಳ ಪರ ಅವರು ಪ್ರಚಾರ ನಡೆಸಲಿದ್ದಾರೆ. ಅವರು ನಾಗಾಂವ್ ಜಿಲ್ಲೆಯ ಕಲಿಯಾಬೋರ್ ಕ್ಷೇತ್ರದ ಮಿಸ್ಸಾ ಹೈಸ್ಕೂಲ್ ಮೈದಾನದಲ್ಲಿ ಮಧ್ಯಾಹ್ನ ಎಜಿಪಿ ಅಭ್ಯರ್ಥಿ ಕೇಶಬ್ ಮಹಾಂತ ಅವರನ್ನು ಬೆಂಬಲಿಸಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ, ಕೇಂದ್ರ ಗೃಹ ಸಚಿವರು ಗುವಾಹಟಿಗೆ ಪ್ರಯಾಣಿಸಲಿದ್ದಾರೆ, ನಾಳೆ ಅಮಿತ್ ಶಾ, ಗೋಲೋಕ್‌ಗಂಜ್ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯನ್ನು ಬೆಂಬಲಿಸಿ ಧುಬ್ರಿ ಜಿಲ್ಲೆಯ ರಾಟಿಯಾದಹಾದ ಮೇಳ ಮೈದಾನ ಕ್ಷೇತ್ರದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಅವರು ಗೋಲ್‌ಪಾರ ಜಿಲ್ಲೆಯ ದುಧ್‌ನೋಯಿಗೆ ತೆರಳಿ ದುಧ್‌ನೋಯ್ ಕ್ಷೇತ್ರದ ಅಭ್ಯರ್ಥಿಯನ್ನು ಬೆಂಬಲಿಸಿ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಲಿದ್ದಾರೆ.

<><><>

ದೇಶದ ವಿವಿಧ ಭಾಗಗಳಲ್ಲಿ ಇಂದು ಹನುಮಾನ್ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಈ ದಿನವನ್ನು ಹನುಮಂತನ ಜನ್ಮ ದಿನವಾಗಿ ಆಚರಿಸಲಾಗುತ್ತಿದ್ದು, ರಾಜಧಾನಿ ನವದೆಹಲಿಯಲ್ಲಿ ಭಕ್ತರು ಬೆಳಗ್ಗೆಯಿಂದಲೇ ಹನುಮಂತನ ದೇವಾಲಯಗಳಿಗೆ ತೆರಳಿ ಪೂಜೆ ಸಲ್ಲಿಸುತ್ತಿದ್ದಾರೆ. ಕಾನೌಟ್‌ನ ಪ್ರಾಚೀನ್ ಹನುಮಾನ್ ಮಂದಿರದಲ್ಲಿ ಹೆಚ್ಚಿನ ಜನಸಂದಣಿ ಕಂಡುಬಂದಿದೆ. ಈ ಸಂದರ್ಭದಲ್ಲಿ ಹನುಮಾನ್ ಚಾಲೀಸಾ, ಸುಂದರಕಾಂಡ ಹಾಗೂ ಅಖಂಡ ರಾಮಾಯಣ ಪಠಣ ನಡೆಯುತ್ತಿದೆ. ಉತ್ತರ ಪ್ರದೇಶದಾದ್ಯಂತ ದೇವಾಲಯಗಳಲ್ಲಿ ಹೆಚ್ಚಿನ ಭಕ್ತರು ಕಂಡುಬಂದಿದ್ದು, ಅಯೋಧ್ಯೆಯ ಹನುಮಾನ್ ಗುಡಿಯಲ್ಲಿ ಭಕ್ತರು ಸರತಿ ಸಾಲಿನಲ್ಲಿ ನಿಂತು ದರ್ಶನ ಪಡೆಯುತ್ತಿದ್ದಾರೆ.

<><><>

ಗುಣಮಟ್ಟದ ಶಿಕ್ಷಣದ ಮೂಲಕ ಆದಿವಾಸಿ ಸಮುದಾಯಗಳ ಸಬಲೀಕರಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುವಾಲ್ ಓರಾಂ ಪುನರುಚ್ಚರಿಸಿದ್ದಾರೆ. ನವದೆಹಲಿಯಲ್ಲಿ ರಾಷ್ಟ್ರೀಯ ಆದಿವಾಸಿ ವಿದ್ಯಾರ್ಥಿಗಳ ಶಿಕ್ಷಣ ಸಂಸ್ಥೆಯ ಲನೇ ಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಏಕಲವ್ಯ ಮಾದರಿ ವಸತಿ ಶಾಲೆಗಳು ಆದಿವಾಸಿ ಅಭಿವೃದ್ಧಿಗೆ ಕಾರಣವಾಗಿದೆ. ಆಧುನಿಕ ಸೌಲಭ್ಯಗಳು, ಡಿಜಿಟಲ್ ಕಲಿಕೆ, ಕ್ರೀಡಾ ಮೂಲಸೌಕರ್ಯ ಮತ್ತು ವಸತಿ ವ್ಯವಸ್ಥೆಗಳನ್ನು ಒದಗಿಸಲಾಗುತ್ತಿದೆ, ಕೌಶಲ್ಯಾಭಿವೃದ್ಧಿ,

ಸಾಂಸ್ಕೃತಿಕ ಸಂರಕ್ಷಣೆ ಹಾಗೂ ಶೈಕ್ಷಣಿಕ ಮೇಲುಸ್ತುವಾರಿಗೂ ಒತ್ತು ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

<><><><>

ನವದೆಹಲಿ ಪ್ರಧಾನಮಂತ್ರಿಗಳ ಸಂಗ್ರಹಾಲಯ ಮತ್ತು ಗ್ರಂಥಾಲಯ “ಪಿಎಂಎಂಎಲ್ ಸಂಗ್ರಹಗಳು” ಎಂಬ ಅಪರೂಪದ ಪ್ರದರ್ಶನವನ್ನು ಸಾರ್ವಜನಿಕರಿಗೆ ತೆರೆಯಲಾಗಿದೆ. ಇದು ಭಾರತದ ಆಧುನಿಕ ಇತಿಹಾಸದ ಮಹತ್ವದ ದಾಖಲೆಗಳ ಒಂದು ಕಿರು ನೋಟವನ್ನು ಒಳಗೊಂಡಿದೆ. ಮೊದಲ ಬಾರಿಗೆ, ಪಿಎಂಎಂಎಲ್ ತನ್ನ ವಿಶಾಲ ಭಂಡಾರದಿಂದ ಆಯ್ದ ದಾಖಲೆಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ಮಹಾತ್ಮ ಗಾಂಧೀಜಿ ಬರೆದ ಪತ್ರ, ಜವಾಹರಲಾಲ್ ನೆಹರು ಅವರ “ಟ್ರೈಸ್ಟ್ ವಿತ್ ಡೆಸ್ಟಿನಿ” ಭಾಷಣದ ಕೈಬರಹ ಕರಡು ಹಾಗೂ ತುರ್ತು ಪರಿಸ್ಥಿತಿಯ ಅವಧಿಯ ಅಟಲ್ ಬಿಹಾರಿ ವಾಜಪೇಯಿ ಅವರ ಪತ್ರ ವ್ಯವಹಾರಗಳು ಪ್ರಮುಖ ಆಕರ್ಷಣೆಗಳಾಗಿವೆ. ಪಿಎಂಎಂಎಲ್ ಪ್ರಕಾರ, ೨.೫ ಕೋಟಿಗೂ ಅಧಿಕ ದಾಖಲೆಗಳನ್ನು ಒಳಗೊಂಡಿರುವ ಈ ಸಂಗ್ರಹ ದೇಶದಲ್ಲೇ ಏಕೈಕವಾಗಿದೆ. ಪಿಎಂಎಂಎಲ್ ಕಾರ್ಯಕಾರಿ ಮಂಡಳಿ ಅಧ್ಯಕ್ಷ ನೃಪೇಂದ್ರ ಮಿಶ್ರ ಪ್ರದರ್ಶನ ಉದ್ಘಾಟಿಸಿದ್ದು, ಇದು ಏಪ್ರಿಲ್ ೧೪ರವರೆಗೆ ಬೆಳಿಗ್ಗೆ ೧೦ರಿಂದ ಸಂಜೆ ೫ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿರುತ್ತದೆ.

<><><><>

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ಇಂದು ೬ನೇ ದಿನಕ್ಕೆ ಕಾಲಿರಿಸಿದ್ದು, ರಾಯ್‌ಪುರದಲ್ಲಿ ಆರ್ಚರಿ ಕ್ರೀಡೆಗಳು ಮತ್ತು ಜಗ್ದಾಲ್‌ಪುರ್‌ನಲ್ಲಿ ಅಥ್ಲೆಟಿಕ್ ಸ್ಪರ್ಧೆಗಳು ನಡೆಯಲಿವೆ.

ಕ್ರೀಡಾಕೂಟದ ಪದಕ ಪಟ್ಟಿಯಲ್ಲಿ ಕರ್ನಾಟಕ ೨೧ ಚಿನ್ನ, ೮ ಬೆಳ್ಳಿ ಮತ್ತು ೭ ಕಂಚಿನ ಪದಕಗಳೊಂದಿಗೆ ಒಟ್ಟು ೩೬ ಪದಕ ಸಂಪಾದಿಸಿ ಅಗ್ರಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>